# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

***ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಹಚ್ಚಿನ್ಸ್ ರಸ್ತೆಯಲ್ಲಿರುವ ಉದ್ಯಾನವನದಲ್ಲಿ ದಿನಾಂಕ: 17-04-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು***

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀಮತಿ ರೋಜಿತಾ, ರಿವೋಬ್ ಅಸೋಸಿಯೇಷನ್ (ರಿ), ಮಾರುತಿಸೇವಾನಗರ
4. ಶ್ರೀ ಎನ್ ರಮೇಶ್, ರಿವೋಬ್ ಅಸೋಸಿಯೇಷನ್ (ರಿ), ಮಾರುತಿಸೇವಾನಗರ
5. ಶ್ರೀ ಕೆ.ಪಿ ಅಬ್ರಾಹಮ್, ರಿವೋಬ್ ಅಸೋಸಿಯೇಷನ್ (ರಿ), ಮಾರುತಿಸೇವಾನಗರ
6. ಶ್ರೀ ಎ.ಆರ್ ಸುರೇಶ್, ರಿವೋಬ್ ಅಸೋಸಿಯೇಷನ್ (ರಿ), ಮಾರುತಿಸೇವಾನಗರ
7. ಶ್ರೀ ಪಾಷಾ, ರೆಸಿಡೆನ್ಷಿಯನ್ ವೆಲ್‌ಫೇರ್ ಅಸೋಸಿಯೇಷನ್, ಮಾರುತಿಸೇವಾನಗರ

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ಎ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
2. ಶ್ರೀ ಜಿ.ವಿ ನಾಗರಾಜ್, ಅಸೆಸ್ಸರ್, ಮಾರುತಿಸೇವಾನಗರ,
3. ಶ್ರೀ ನವೀನ್‌ಕುಮಾರ್, ಸಹಾಯಕ ಅಭಿಯಂತರರು, (ಎಲೆಕ್ಟ್ರಿಕಲ್)
4. ಶ್ರೀ ಕಿಶೋರ್ ಇ.ಎಸ್, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಬಿ ಮಹೇಶ್, ಬಿ.ಡಬ್ಲ್ಯೂ.ಎಸ್.ಎಸ್.ಬಿ
6. ಶ್ರೀ ಕೆ.ಎಸ್.ಕೃಷ್ಣಪ್ಪ, ಪಿ.ಎಸ್.ಐ ಫ್ರೇಜರ್ ಟೌನ್ ಪೋಲೀಸ್ ಠಾಣೆ,
7. ಶ್ರೀ ಜಿ.ಹೆಚ್.ರಾಮಲಿಂಗಯ್ಯ, ಎ.ಎಸ್.ಐ, ಪುಲಿಕೇಶಿನಗರ ಪೋಲೀಸ್ ಠಾಣೆ
8. ಶ್ರೀಮತಿ ಬಿ ಪುಷ್ಪಾ,
9. ಶ್ರೀ ಫಕೃದ್ದೀನ್, ಕಿರಿಯ ಅಭಿಯಂತರರು, ಬೆಸ್ಕಾಂ ಇಲಾಖೆ.

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು, ಮಾಜಿ ಪಾಲಿಕೆ ಸದಸ್ಯರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

| ಕ್ರಸಂ | ಮಾಹಿತಿ | ಕ್ರಮ |
|---|---|---|
| | **ಕಂದಾಯ ಇಲಾಖೆ (Revenue Dept)** | |
| 1 | ವಾರ್ಡ್ ವ್ಯಾಪ್ತಿಯ ಹಚ್ಚಿನ್ಸ್ ರಸ್ತೆಯಲ್ಲಿರುವ ಉದ್ಯಾನವನದ ಖಾತಾವನ್ನು ಈ ಹಿಂದೆ ರದ್ದುಗೊಳಿಸಿದ್ದು, ಈ ಹಿಂದೆ ಇದ್ದ ಎಲ್ಲಾ ದಾಖಲೆಗಳನ್ನು ನೀಡಲು ಶ್ರೀ ಅಬ್ರಾಹಂ ರವರು ಸಭೆಯಲ್ಲಿ ಹಾಜರಿದ್ದ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಕೋರಿದರು. | ಕಂದಾಯ ಇಲಾಖೆಯ ಅಧಿಕಾರಿಗಳು ಹಚ್ಚಿನ್ಸ್ ರಸ್ತೆಯಲ್ಲಿರುವ ಉದ್ಯಾನವನಕ್ಕೆ ಸಂಬಂಧಿಸಿದ ದಾಖಲಾತಿಗಳನ್ನು ಕಛೇರಿಯಲ್ಲಿ ಪರಿಶೀಲಿಸಿ ಮುಂದಿನ ಸಭೆಗೆ ನೀಡಲು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು. |



Scanned with CamScanner

| | | |
|---|---|---|
| | **(OFC Dept)** | |
| 2 | ವಾರ್ಡ್ ವ್ಯಾಪ್ತಿಯ ಲಾಯ್ಡ್ ರಸ್ತೆ, ಹಚ್ಚಿನ್ಸ್ ರಸ್ತೆ, ಡೇವಿಸ್ ರಸ್ತೆ ಮತ್ತು ಅಶೋಕ ರಸ್ತೆಗಳಲ್ಲಿ ಓ.ಎಫ್.ಸಿ ಕೇಬಲ್ ಅಳವಡಿಸುವ ಕಾಮಗಾರಿ ನಡೆಯುತ್ತಿದ್ದು, ಸದರಿ ರಸ್ತೆಗಳಲ್ಲಿ ಕೇಬಲ್ ಅಳವಡಿಸಿದ ನಂತರ ರಸ್ತೆಯನ್ನು ಸಮರ್ಪಕವಾಗಿ ಮುಚ್ಚದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು. | ಸದರಿ ವಿಷಯವಾಗಿ ಈಗಾಗಲೇ ಓ.ಎಫ್.ಸಿ ಕೇಬಲ್ ರವರಿಗೆ ಕ್ರಮ ವಹಿಸಲು ಪತ್ರವನ್ನು ಬರೆಯಾಗಿರುತ್ತದೆ. |
| | ಕಾಮಗಾರಿ ಇಲಾಖೆ **(Engineering Dept)** | |
| 3 | ವಾರ್ಡ್ ವ್ಯಾಪ್ತಿಯ ವೀಲರ್ ರಸ್ತೆಯಲ್ಲಿ ಹಣ್ಣಿನ ಅಂಗಡಿಯನ್ನು ಪಾದಾಚಾರಿ/ರಸ್ತೆಯಲ್ಲಿ ಇಟ್ಟು ವ್ಯಾಪಾರ ಮಾಡುತ್ತಿರುವುದರಿಂದ ರಸ್ತೆಯಲ್ಲಿ ವಾಹನ ನಿಲುಗಡೆ ಮಾಡಿ, ವ್ಯಾಪಾರ ವಹಿವಾಟು ನಡೆಸುತ್ತಿದ್ದು, ಇದರಿಂದ ಸದರಿ ರಸ್ತೆಯಲ್ಲಿ ಸಂಚಾರ ಮಾಡುವ ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದಾಗಿ, ಇದನ್ನು ಕೂಡಲೇ ಸದರಿ ಸ್ಥಳದಿಂದ ತೆರವುಗೊಳಿಬೇಕೆಂದು ಸಭೆಗೆ ತಿಳಿಸಿದರು. | ಎಲ್ಲಾ ಇಲಾಖೆಯ ಸಹಯೋಗದೊಂದಿಗೆ ವಾರ್ಡ್ ವ್ಯಾಪ್ತಿಯಲ್ಲಿ ಪಾದಾಚಾರಿ ಮಾರ್ಗವನ್ನು ಒತ್ತುವರಿಯನ್ನು ತೆರವುಗೊಳಿಸಲು ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು. |
| | ಘನತ್ಯಾಜ್ಯ ನಿರ್ವಹಣೆ **(SWM Department)** | |
| 4 | ವಾರ್ಡ್ ವ್ಯಾಪ್ತಿಯ ಬಡಾವಣೆಗಳಲ್ಲಿ ಸ್ವಚ್ಛತಾ ಕಾರ್ಯವನ್ನು ಪಾಲಿಕೆಯ ಪೌರ ಕಾರ್ಮಿಕರು ಸಮರ್ಪಕವಾಗಿ ನಿರ್ವಹಿಸುತ್ತಿರುವುದು ಕಂಡುಬಂದಿರುತ್ತದೆ. ಆದರೆ ವಾರ್ಡ್‌ನ ನಾಗಯ್ಯನಪಾಳ್ಯ ಮುಖ್ಯರಸ್ತೆ ಹಾಗೂ ಕೆಲವು ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಕಸವನ್ನು ಬೇರ್ಪಡಿಸಿ (ಹಸಿ ಕಸ ಮತ್ತು ಒಣ ಕಸ) ನೀಡಲು ಹಾಗೂ ಕಸವನ್ನು ಪ್ರತಿ ನಿತ್ಯ ಪಾಲಿಕೆಯ ಆಟೋ ಟಿಪ್ಪರ್‌ಗಳಿಗೆ ನೀಡಲು ಜಾಗೃತಿ ಮೂಡಿಸುವುದು ಅವಶ್ಯಕವಾಗಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. | **AEE-SWM** ರವರಿಗೆ ಈ ಬಗ್ಗೆ ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆದಾರರು ತಮ್ಮ ಆಟೋ ಟಿಪ್ಪರ್‌ಗಳಿಗೆ ಕಡ್ಡಾಯವಾಗಿ ಮೈಕ್ ಅಳವಡಿಸಿ, ಜನ ಜಾಗೃತಿ ಮೂಡಿಸಲು ಹಾಗೂ ಮನೆ ಮನೆಗಳಿಗೆ ಕಸ ಸಂಗ್ರಹಣೆ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಲು ಸಭೆಯಲ್ಲಿ ತಿಳಿಸಲಾಯಿತು. |
| | ಕಾಮಗಾರಿ ಇಲಾಖೆ **(Engineering Dept)** | |
| 5 | ವಾರ್ಡ್ ವ್ಯಾಪ್ತಿಯಲ್ಲಿ ಮೈಸೂರು ಬ್ಯಾಂಕ್ ಹತ್ತಿರ ಸುಮಾರು ದಿನಗಳಿಂದ ಡೆಬ್ರೀಸ್ ಬಿದ್ದಿದ್ದು, ಅದನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಸದರಿ ಪ್ರದೇಶದಲ್ಲಿರುವ ಡೆಬ್ರೀಸ್ ಅನ್ನು ಕೂಡಲೇ ತೆರವುಗೊಳಿಸಲಾಗುವುದೆಂದು ಸಭೆಗೆ ತಿಳಿಸಿದರು. |
| | ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ **(BWSSB)** | |
| 6 | ವಾರ್ಡ್ ವ್ಯಾಪ್ತಿಯ ಕೆಲವು ಪ್ರದೇಶಗಳಲ್ಲಿ ಬೆಂಗಳೂರು ನೀರು ಸರಬರಾಜು ನಿಗಮದ ಪೈಪ್‌ಗಳು ಒಡೆದು ಹೋಗಿದ್ದು, ಇದರಿಂದ ಕುಡಿಯುವ ನೀರು ಪೋಲಾಗುತ್ತಿರುವುದು ಕಂಡು ಬಂದಿದ್ದು, ಇದನ್ನು ಕೂಡಲೇ ಸರಿಪಡಿಸಲು ಸಭೆಗೆ ತಿಳಿಸಿದರು. | ಈ ಬಗ್ಗೆ ಕೂಡಲೇ ಕ್ರಮ ವಹಿಸಲು ತಿಳಿಸಲು ಸಭೆಯಲ್ಲಿ ತಿಳಿಸಿದರು |



Scanned with CamScanner

| | | |
|---|---|---|
| | **ಬೀದಿ ದೀಪಗಳ ನಿರ್ವಹಣೆ (Street Lights)** | |
| 7 | ವಾರ್ಡ್ ವ್ಯಾಪ್ತಿಯ ಕೆಲವು ಪ್ರದೇಶದಲ್ಲಿ ಬೀದಿ ದೀಪಗಳು ಇಲ್ಲದೇ ಇರುವುದರಿಂದ ರಾತ್ರಿ ಸಮಯದಲ್ಲಿ ಸರಗಳ್ಳತನ ಹಾಗೂ ದರೋಡೆ ಪ್ರಕರಣಗಳು ನಡೆಯುವ ಸಾಧ್ಯತೆ ಇರುವುದರಿಂದ ಸದರಿ ಪ್ರದೇಶದಲ್ಲಿ ಕೂಡಲೇ ಹೊಸದಾಗಿ ಬೀದಿ ದೀಪಗಳನ್ನು ಅಳವಡಿಸಲು ಸಭೆಗೆ ತಿಳಿಸಿದರು. | ಈ ಬಗ್ಗೆ ಬೀದಿ ದೀಪಗಳ ನಿರ್ವಹಣೆ **(Street Lights)** ರವರು ಕೂಡಲೇ ಕ್ರಮ ವಹಿಸಲು ಸೂಚಿಸಲಾಯಿತು. |
| | **ಪೊಲೀಸ್ ಇಲಾಖೆ – Police Department** | |
| 8 | ವಾರ್ಡ್ ವ್ಯಾಪ್ತಿಯಲ್ಲಿರುವ ಭಾರತೀಯ ಸ್ಟೇಟ್ ಬ್ಯಾಂಕ್ ನ ಮುಂಭಾಗದಲ್ಲಿ ಗ್ರಾಹಕರು ನಿಲ್ಲಿಸುವ ವಾಹನಗಳಿಂದ ಸಾರ್ವಜನಿಕ ವಾಹನಗಳಿಗೆ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದ್ದು, ಈ ಬಗ್ಗೆ ಬ್ಯಾಂಕ್ ಅಧಿಕಾರಿಗಳೊಂದಿಗೆ ಚರ್ಚಿಸಿ, ತಮ್ಮ ಶಾಖೆಯ ಗ್ರಾಹಕರ ವಾಹನ ನಿಲುಗಡೆಗೆ ಬದಲಿ ವ್ಯವಸ್ಥೆ ಮಾಡಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು. | ಈ ಬಗ್ಗೆ ಪೊಲೀಸ್ ಇಲಾಖೆಯಿಂದ ಬ್ಯಾಂಕ್ ಅಧಿಕಾರಿಗಳೊಂದಿಗೆ ಚರ್ಚಿಸಿ, ಕ್ರಮ ವಹಿಸಲಾಗುವುದೆಂದು ಸಭೆಗೆ ತಿಳಿಸಿದರು. |
| | **ಪೊಲೀಸ್ ಇಲಾಖೆ – Police Department** | |
| 9 | ಇತ್ತೀಚೆಗೆ ಕೋವಿಡ್ 19 ಪ್ರಕರಣಗಳು ಹೆಚ್ಚಾಗುತ್ತಿದ್ದು, ಸಾರ್ವಜನಿಕರು ಸರ್ಕಾರದ ಯಾವುದೇ ಮಾರ್ಗಸೂಚಿಗಳನ್ನು ಕಟ್ಟು ನಿಟ್ಟಾಗಿ ಪಾಲಿಸದೇ ಇರುವುದರಿಂದ ಪ್ರಕರಣಗಳು ಹೆಚ್ಚಾಗುತ್ತಿರುತ್ತದೆ. ಆದುದರಿಂದ ಜನಸಾಮಾನ್ಯರಿಗೆ ಪೊಲೀಸ್ ಇಲಾಖೆಯ ಸಿಬ್ಬಂದಿಗಳ ಸಹಯೋಗದೊಂದಿಗೆ ಜನ ಜಾಗೃತಿ ಹಾಗೂ ಮಾಸ್ಕ್ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳದ ಜನರಿಗೆ ದಂಡ ವಿಧಿಸಲು ಹಾಗೂ ಪ್ರಕರಣ ದಾಖಲಿಸಲು ಸಭೆಗೆ ತಿಳಿಸಿದರು. | ಈ ಬಗ್ಗೆ ಪೊಲೀಸ್ ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ವಹಿಸಲಾಗುವುದು ಎಂದು ಸಭೆಗೆ ತಿಳಿಸಿದರು. |

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

19/04/2021

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

<u>ಪ್ರತಿಯನ್ನು</u>

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.



Scanned with CamScanner